# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **497** |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14.08.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಅಧಿಕಾರಿಗಳು ಇತ್ತೀಚೆಗೆ ದಾಳಿ ನಡೆಸಿ, ಪರಿಶೀಲನೆ ಮಾಡಿದಾಗ, ವ್ಯಾಪಕವಾಗಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವುದು ಕಂಡುಬಂದಿದ್ದು, ರಾಜ್ಯದ ಜೈಲುಗಳಲ್ಲಿ ನಡೆಯುವ ಅಕ್ರಮ ಚಟುವಟಿಕೆಗಳಿಗೆ ಯಾವುದೇ ರೀತಿಯಲ್ಲಿಯೂ ಇದುವರೆವಿಗೂ ಕಡಿವಾಣ ಹಾಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | • ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಕಾರಾಗೃಹದ ಅಧಿಕಾರಿ ಸಿಬ್ಬಂದಿಗಳು ಮತ್ತು ಪೊಲೀಸ್ ಇಲಾಖೆಯ ಅನಿರೀಕ್ಷಿತ ತಪಾಸಣೆ ನಡೆಸುವ ಮೂಲಕ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.<br>• ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಇಲ್ಲಿಯವರೆಗೆ ಒಟ್ಟು 88 ಪ್ರಕರಣಗಳು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು, ಅದರಲ್ಲಿ ಮೊಬೈಲ್ ಬಳಕೆಗೆ ಸಂಬಂಧಿಸಿದಂತೆ 35 ಪ್ರಕರಣಗಳು, ಮಾದಕ ವಸ್ತುಗಳಿಗೆ ಸಂಬಂಧಿಸಿದಂತೆ 04 ಪ್ರಕರಣಗಳು ಹಾಗೂ ಬಂದಿಗಳ ಗಲಾಟೆ ಹಾಗೂ ಇತರೆ ಪ್ರಕರಣಗಳಿಗೆ ಸಂಬಂಧಿಸಿದಂತೆ 49 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.<br>• ಕಾರಾಗೃಹದ ಸೂಕ್ಷ್ಮ ಬಂದಿಗಳನ್ನು ಹೆಚ್ಚಿನ ನಿಗಾವಹಿಸಲು ಅಂತಹ ಬಂದಿಗಳನ್ನು ಪ್ರತ್ಯೇಕಿಸಿ ಅವರ ಚಲನ-ವಲನಗಳನ್ನು ನಿರ್ಬಂಧಿಸಿ, ಅಧಿಕಾರಿ ಸಿಬ್ಬಂದಿಗಳಿಂದ ಆಗಾಗ್ಗೆ ನಿರಂತರ ಪರಿಶೀಲನೆ ಹಾಗೂ ತಪಾಸಣಾ ಕಾರ್ಯಗಳನ್ನು ನಡೆಸಲಾಗುತ್ತಿದೆ.<br>• ತರಬೇತಿ ಹೊಂದಿದ ಕಾರಾಗೃಹದ ಶ್ವಾನದಳ (DOG SQUAD) ಉಪಯೋಗಿಸಿಕೊಂಡು ಕಾರಾಗೃಹದಲ್ಲಿ ನಿರಂತರ ತಪಾಸಣೆ ನಡೆಸಲಾಗುತ್ತಿದೆ.<br>• ಕಾರಾಗೃಹದಲ್ಲಿ ಬಂದಿಗಳ ಮೇಲೆ ಹೆಚ್ಚಿನ ನಿಗಾವಹಿಸಲು, ಬಂದಿಗಳ ಚಲನವಲನಗಳನ್ನು ಸೂಕ್ಷ್ಮವಾಗಿ ಗಮನಿಸಲು 03 ಸಂಖ್ಯೆ ಡ್ರೋನ್ ಕ್ಯಾಮೆರಾಗಳನ್ನು ಬಳಸಲಾಗುತ್ತಿದೆ.<br>• ಕಾರಾಗೃಹದಲ್ಲಿ ಬಂದಿಗಳ ಚಲನವಲನಗಳನ್ನು ದಾಖಲು ಮಾಡಿಕೊಳ್ಳುವ ಸಲುವಾಗಿ ಬಾಡಿವೋರ್ನ್ ಕ್ಯಾಮೆರಾಗಳ ಸಂಖ್ಯೆಯನ್ನು ಹೆಚ್ಚಿಸಲಾಗಿರುತ್ತದೆ. |

| | | |
|---|---|---|
| | | • ಕಾರಾಗೃಹದಲ್ಲಿ ಹೊಸದಾಗಿ 03 ಸಂಖ್ಯೆಯ T-HCBS ಟವರ್‌ಗಳನ್ನು ಅಳವಡಿಸಲಾಗಿದೆ ಹಾಗೂ ಕಾರಾಗೃಹದಲ್ಲಿ ಅಳವಡಿಸಲಾಗಿದ್ದ 19 ಸಂಖ್ಯೆಯ ಮೊಬೈಲ್ ಜಾಮರ್‌ಗಳನ್ನು 2ಜಿ ಯಿಂದ 5ಜಿ ಮೇಲ್ದರ್ಜೆಗೆ ಉನ್ನತೀಕರಿಸುವ ಕಾರ್ಯ ಟೆಸ್ಟಿಂಗ್ ಅಂಡ್ ಕ್ಯಾಲಿಬರೇಷನ್ ಪರಿಶೀಲನಾ ಹಂತದಲ್ಲಿದೆ.<br>• ಕಾರಾಗೃಹದಲ್ಲಿ ಕಳೆದ ಎರಡು ವರ್ಷಗಳಲ್ಲಿ ಹೆಚ್ಚುವರಿಯಾಗಿ 100 ಸಂಖ್ಯೆ ಸಿ.ಸಿ.ಟಿ.ವಿ ಕ್ಯಾಮರಾಗಳ ಸಂಖ್ಯೆಯನ್ನು ಹೆಚ್ಚಿಸುವುದರೊಂದಿಗೆ ಎ.ಐ ತಂತ್ರಜ್ಞಾನ ಸಹ ಅಳವಡಿಸಿ, ಬಂದಿಗಳ ಚಲನ-ವಲನಗಳನ್ನು ನಿಗಾವಹಿಸಲಾಗುತ್ತಿದೆ.<br>• ಕಾರಾಗೃಹದ ಒಳಗೆ ಸರಬರಾಜು ಆಗುವ ವಸ್ತುಗಳನ್ನು ಪರಿಣಾಮಕಾರಿಯಾಗಿ ತಪಾಸಣೆಗೊಳಪಡಿಸಲು 03 ಸಂಖ್ಯೆಯ ಹೊಸ ಬ್ಯಾಗೇಜ್ ಸ್ಕ್ಯಾನರ್ ಯಂತ್ರಗಳನ್ನು ಬಳಸಿಕೊಳ್ಳಲಾಗುತ್ತಿದೆ.<br>• ಕಾರಾಗೃಹದ ಭದ್ರತೆ ಹಿತದೃಷ್ಟಿಯಿಂದ ಕೆ.ಎಸ್.ಐ.ಎಸ್.ಎಫ್. ಸಿಬ್ಬಂದಿಗಳಿಂದ ಕಾರಾಗೃಹದ ಹೊರಗೋಡೆಯ ಸುತ್ತ ವಾಚಿಂಗ್ ಪಾಯಿಂಟ್‌ಗಳನ್ನು ಹೆಚ್ಚಿಸಲಾಗಿರುತ್ತದೆ.<br>• ಕಾರಾಗೃಹದಲ್ಲಿ 03 ಹಂತದ ಭದ್ರತೆಯನ್ನು ಅಳವಡಿಸಲಾಗಿರುತ್ತದೆ.<br>• ಕಾರಾಗೃಹದಲ್ಲಿನ ವಾಚ್‌ಟವರ್‌ಗಳಲ್ಲಿ ಬಂದಿಗಳ ಚಲನ ವಲನಗಳ ಸೂಕ್ಷ್ಮ ನಿಗಾವಣೆಗೆ ಬೈನಾಕ್ಯುಲರ್‌ಗಳನ್ನು ಹಾಗೂ ಸರ್ಚ್ ಲೈಟ್‌ಗಳನ್ನು ಅಳವಡಿಸಲಾಗಿದೆ. |
| (ಆ) | ಬಂದಿದ್ದಲ್ಲಿ, ರಾಜ್ಯದ ಬಹುತೇಕ ಎಲ್ಲಾ ಕಾರಾಗೃಹದಲ್ಲಿಯೂ ಸಹ ಅವಿರತವಾಗಿ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದರೂ, ಇದನ್ನು ತಡೆಯಲು ಸರ್ಕಾರ ಇದುವರೆಗೆ ಯಾವುದೇ ಕಠಿಣ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗಿರುವುದಕ್ಕೆ ಕಾರಣಗಳೇನು; | **ರಾಜ್ಯದ ಕಾರಾಗೃಹಗಳಲ್ಲಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.**<br>• Karnataka Prison (Amendment) Act -2022 ನಂತರ ದಿನಾಂಕ: 05-04-2022 ರಿಂದ 31-07-2025 ರವರೆಗೆ ರಾಜ್ಯದ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಕುರಿತಂತೆ ವಿವಿಧ ಕಾರಾಗೃಹಗಳಲ್ಲಿ 269 FIR ದಾಖಲಾಗಿರುತ್ತದೆ.<br>• ಸರ್ಕಾರದ ಸುತ್ತೋಲೆ ಸಂಖ್ಯೆ: ಹೆಚ್ ಡಿ 03 ಪಿಆರ್‌ಎ 2010, ದಿನಾಂಕ: 22-03-2010 ರನ್ವಯ ಅನಿರೀಕ್ಷಿತ |

| | | |
|---|---|---|
| | | ತಪಾಸಣೆಗಳನ್ನು ಕೈಗೊಳ್ಳುವಂತೆ ಪೊಲೀಸ್ ಇಲಾಖೆಗೆ ಆದೇಶಿಸಲಾಗಿರುವುದನ್ನು ಎಲ್ಲಾ ಕಾರಾಗೃಹಗಳ ಮುಖ್ಯಸ್ಥರುಗಳಿಗೆ ಸೂಚಿಸಲಾಗಿದ್ದು ಅದರಂತೆ ಕ್ರಮವಹಿಸಲಾಗುತ್ತಿದೆ.<br><br>• ರಾಜ್ಯದ ಕೇಂದ್ರ ಕಾರಾಗೃಹಗಳಾದ ಬೆಂಗಳೂರು, ಬಳ್ಳಾರಿ, ಬೆಳಗಾವಿ. ಕಲಬುರಗಿ. ಧಾರವಾಡ, ವಿಜಯಪುರ, ಮೈಸೂರು, ಶಿವಮೊಗ್ಗ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹಗಳಲ್ಲಿ ಹೊರ ಆವರಣದ ಭದ್ರತೆಗೆ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯನ್ನು ನಿಯೋಜಿಸಲಾಗಿರುತ್ತದೆ.<br><br>• ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಹೊರಭಾಗ ಮತ್ತು ಒಳಭಾಗದಲ್ಲಿ ನಿಷೇಧಿತ ವಸ್ತುಗಳ ಕುರಿತಂತೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿ ಜಾಗೃತಿ ಮೂಡಿಸಲು ಕ್ರಮವಹಿಸಲಾಗಿದೆ.<br><br>• ಕಾರಾಗೃಹಗಳಲ್ಲಿ ಬಂದಿಗಳು ಅನುಸರಿಸಬೇಕಾದ ಕ್ರಮಗಳು / ನಿಯಮಗಳ ಕುರಿತಂತೆ ಪ್ರತಿಯೊಂದು ಕಾರಾಗೃಹದಲ್ಲಿ ಒಬ್ಬ ಅಧಿಕಾರಿಯನ್ನು ನೇಮಕ ಮಾಡಿ ಬಂದಿಗಳಲ್ಲಿ Do's and Don'ts ಬಗ್ಗೆ ಅರಿವು ಮೂಡಿಸಲು ನಿರ್ದೇಶನ ನೀಡಲಾಗಿದೆ.<br><br>• ಸಂಬಂಧಪಟ್ಟ ಜಿಲ್ಲೆಗಳ ಪೊಲೀಸ್ ಅಧೀಕ್ಷಕರು ಹಾಗೂ ಪೊಲೀಸ್ ಆಯುಕ್ತರ ಅಧ್ಯಕ್ಷತೆಯಲ್ಲಿ ಕಾರಾಗೃಹಗಳಲ್ಲಿ ಅಪರಾಧಗಳು ಮತ್ತು ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಆದೇಶ ಸಂಖ್ಯೆ: CRM-3/03/2022 ದಿನಾಂಕ: 17.02.2022 ರಲ್ಲಿ ಸಮಿತಿಗಳನ್ನು ಪುನರ್ ರಚಿಸಲಾಗಿದ್ದು ಹಾಗೂ ತ್ರೈಮಾಸಿಕವಾಗಿ ಸಭೆಗಳನ್ನು ನಡೆಸಲು ಅಗತ್ಯ ನಿರ್ದೇಶನಗಳನ್ನು ಸಹ ನೀಡಲಾಗಿರುತ್ತದೆ.<br><br>• ಕಾರಾಗೃಹಗಳಲ್ಲಿ ಜಂಟಿ ಭದ್ರತಾ ಪರಿಶೀಲನಾ ಸಭೆಗಳನ್ನು ನಡೆಸಲಾಗುತ್ತಿದೆ.<br><br>• ಕಾರಾಗೃಹಗಳಿಂದ ಬಂದಿಗಳು ಪರಾರಿಯಾಗುವ ಪ್ರಕರಣಗಳನ್ನು ತಡೆಗಟ್ಟಲು ಮುಖ್ಯ ಗೋಡೆಯ ಮೇಲೆ ರೇಜರ್ ಬ್ಲೇಡ್ ಫೆನ್ಸಿಂಗ್ ಅಳವಡಿಸಲಾಗಿರುತ್ತದೆ ಹಾಗೂ ಬಂದಿಗಳ ಚಲನ ವಲನಗಳನ್ನು ನಿಗಾವಹಿಸಲು ಕಾರಾಗೃಹಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ. |

| | | |
|---|---|---|
| | | • ಕಾರಾಗೃಹಗಳಲ್ಲಿ ಪ್ರತಿನಿತ್ಯ ಬೀಗಮುದ್ರೆ ತೆರವಿನ ಮತ್ತು ಬೀಗಮುದ್ರೆ ಸಮಯದಲ್ಲಿ ತಪಾಸಣೆ ಜೊತೆಗೆ ಅನಿರೀಕ್ಷಿತ ತಪಾಸಣೆಯನ್ನು ಕಟ್ಟುನಿಟ್ಟಾಗಿ ಕೈಗೊಳ್ಳುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ. |
| (ಇ) | ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿರುವ ವಿವಿಧ ಕಾರಾಗೃಹಗಳಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳನ್ನು ತಡೆಯಲು ವಿಫಲವಾಗಿರುವ ಎಷ್ಟು ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಇದುವರೆಗೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ;<br>(ವಿವರ ನೀಡುವುದು) | ಕಳೆದ 02 ವರ್ಷಗಳಲ್ಲಿ ರಾಜ್ಯದಲ್ಲಿರುವ ವಿವಿಧ ಕಾರಾಗೃಹಗಳಲ್ಲಿ ನಡೆದ ಅಕ್ರಮ ಚಟುವಟಿಕೆಗಳನ್ನು ತಡೆಯಲು ವಿಫಲರಾಗಿ ಕರ್ತವ್ಯಲೋಪವೆಸಗಿದ ಒಟ್ಟು 214 ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗಿದೆ.<br><br>ಶಿಸ್ತು ಕ್ರಮ ಜರುಗಿಸಿದ ಅಧಿಕಾರಿ ಸಿಬ್ಬಂದಿಗಳ ಪೈಕಿ ಈಗಾಗಲೇ 31 ಅಧಿಕಾರಿ / ಸಿಬ್ಬಂದಿಗಳ ವಿರುದ್ಧದ ಇಲಾಖಾ ವಿಚಾರಣೆ ನಡೆಸಿ ದಂಡನೆ ವಿಧಿಸಲಾಗಿದೆ. ಉಳಿದ 183 ಜನ ಅಧಿಕಾರಿ/ಸಿಬ್ಬಂದಿಗಳ ವಿರುದ್ಧದ ಶಿಸ್ತು ಕ್ರಮಕ್ಕಾಗಿ ಅಗತ್ಯ ಕ್ರಮ ವಹಿಸಲಾಗಿರುತ್ತದೆ. |
| (ಈ) | ರಾಜ್ಯದಲ್ಲಿರುವ ಜೈಲುಗಳಲ್ಲಿ ನಿರಂತರವಾಗಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳನ್ನು ತಡೆಯುವುದರ ಜೊತೆಗೆ ಅಲ್ಲಿ ನಡೆಯುವ ಎಲ್ಲಾ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ಸಂಪೂರ್ಣವಾಗಿ ತಡೆಯಲು ಸರ್ಕಾರ ಯಾವ ರೀತಿಯಲ್ಲಿ ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವುದು ? | 1) ಕಾರಾಗೃಹಗಳಲ್ಲಿ ಜರುಗುವ ಅಕ್ರಮ ಚಟುವಟಿಕೆಗಳನ್ನು ತಡೆಗಟಲು ವಿಫಲರಾಗುವ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ 1957ರ ಕೆ.ಸಿ.ಎಸ್ (ಸಿಸಿ ಮತ್ತು ಎ) ನಿಯಮಗಳನ್ವಯ ಕಠಿಣ ಶಿಸ್ತು ಕ್ರಮ ಜರುಗಿಸಲಾಗುತ್ತಿದ್ದು, ವಿವರವಾದ ಇಲಾಖಾ ವಿಚಾರಣೆ ನಡೆಸಲು ನಿವೃತ್ತ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲಾಗುತ್ತಿದೆ.<br><br>2) ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದವರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಲಾಗುತ್ತಿದೆ.<br><br>3) ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇದಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಅನಿರೀಕ್ಷಿತ ತಪಾಸಣೆಗಳನ್ನು ನಡೆಸಲು ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಎಲ್ಲಾ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ.<br><br>4) ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳನ್ನು ಹಾಗೂ ಸಂವಹನ ಉದ್ದೇಶಕ್ಕಾಗಿ ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಮಾಡದಂತೆ ಮತ್ತು ಯಾವುದೇ ರೀತಿಯ ಮಾದಕ ವಸ್ತುಗಳು, ನಿಷೇದಿತ ವಸ್ತುಗಳ ಬಳಕೆಯನ್ನು |

| | | |
|---|---|---|
| | | ಮಾಡದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ, ಕರ್ನಾಟಕ ಕಾರಾಗೃಹಗಳ ನಿಯಮಗಳು-1974ರ ನಿಯಮ 42(3)ರಲ್ಲಿನ ನಿಷೇದಿತ ವಸ್ತುಗಳ ಪಟ್ಟಿಗೆ (ಕರ್ನಾಟಕ ಕಾರಾಗೃಹ (ತಿದ್ದುಪಡಿ) ನಿಯಮಗಳು-2022) ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ.<br><br>5) ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳನ್ನು ಹಾಗೂ ಸಂವಹನ ಉದ್ದೇಶಕ್ಕಾಗಿ ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಮಾಡದಂತೆ ಮತ್ತು ಯಾವುದೇ ರೀತಿಯ ಮಾದಕ ವಸ್ತುಗಳು, ನಿಷೇದಿತ ವಸ್ತುಗಳ ಬಳಕೆಯನ್ನು ಮಾಡದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮ ಜರುಗಿಸುವ ಕುರಿತು ಕರ್ನಾಟಕ ಬಂದೀಖಾನೆಗಳ ಅಧಿನಿಯಮ, 1963ರ ಕಲಂ 42ಕ್ಕೆ (ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022) ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ.<br><br>6) ರಾಜ್ಯದ ಕಾರಾಗೃಹಗಳಲ್ಲಿ ಮೊಬೈಲ್ ಫೋನ್ ಗಳು ಮತ್ತು ಇತರೆ ಯಾವುದೇ ರೀತಿಯ ನಿಷೇದಿತ ವಸ್ತುಗಳ ಕಳ್ಳ ಸಾಗಣಿಕೆಯನ್ನು ಮತ್ತು ಅಪರಾಧ ಚಟುವಟಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ. |

**ಸಂಖ್ಯೆ: ಹೆಚ್‌ಡಿ 228 ಪಿಆರ್‌ಎ 2025**

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು